ಆಕಾಶವಾಣಿ 28.11.2024

ಪ್ರದೇಶ ಸಮಾಚಾರ ಮಧ್ಯಾಹ್ನ 12 ಕ್ಕೆ

ಓದುತ್ತಿರುವವರು ರವಿ ಕುಲಕರ್ಣಿ ಗುರುವಾರ

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಸಂಸ್ಥೆ ವತಿಯಿಂದ ಬೆಂಗಳೂರಿನ ಬಿನ್ನಿಮಿಲ್ ರಸ್ತೆ, ಛಲವಾದಿ ಪಾಳ್ಯದಲ್ಲಿ ನಿರ್ಮಿಸಿರುವ ದ್ವಿತೀಯ ಹಂತದ ಘನತ್ಯಾಜ್ಯ ಘಟಕ ಹಾಗೂ ಸ್ವಯಂ ಚಾಲಿತ ತ್ಯಾಜ್ಯ ವಿಂಗಡಣೆ ಘಟಕದ ಉದ್ಘಾಟನೆಯನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ ಇಂದು ನೆರವೇರಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಸತಿ ಸಚಿವ ಜಮೀರ್ ಅಹ್ಮದ್ ಸೇರಿದಂತೆ ಇನ್ನಿತರ ಗಣ್ಯರು ಪಾಲ್ಗೊಳ್ಳಲಿದ್ದಾರೆ.

2. ಹಿಂದಿನ ಸರ್ಕಾರಗಳ ನಿರ್ಲಕ್ಷ್ಯ ಧೋರಣೆಯಿಂದ ಮುಚ್ಚಲ್ಪಟ್ಟಿದ್ದ ಮೈ ಽಗರ್ ಸಕ್ಕರೆ ಕಾರ್ಖಾನೆಗೆ ಸುಮಾರು 50 ಕೋಟಿ ರೂಪಾಯಿ ಅನುದಾನ ನೀಡುವ ಮೂಲಕ ಮರು ಚಾಲನೆ ನೀಡಲಾಗಿತ್ತು. ಇದರ ಫಲವಾಗಿ 2023 ರ ಆಗಸ್ಟ್ ತಿಂಗಳಿಂದ ಕಬ್ಬು ಅರೆಯುವ ಕಾರ್ಯ ಪ್ರಾರಂಭವಾಗಿದೆ ಎಂದು ಕೃಷಿ ಖಾತೆ ಸಚಿವ ಎನ್.ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ಈ ವ ಽದ ಕಬ್ಬು ಬೆಳೆಯ ಪ್ರಮಾಣ ಹಾಗೂ ಕಬ್ಬು ನುರಿಸಲು ನೋಂದಾಯಿಸಿಕೊಂಡ ರೈತರ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು, 2024-25 ನೇ ಸಾಲಿನ ಕಬ್ಬು ಅರೆಯುವ ಕಾರ್ಯವನ್ನು ನವೆಂಬರ್ 24 ರಂದು ಮುಕ್ತಾಯಗೊಳಿಸಲು ನಿರ್ಧರಿಸಿ ಹತ್ತು ದಿನ ಮೊದಲೇ ಈ ವಿ ಽಯವನ್ನು ಸಂಬಂಧಪಟ್ಟ ರೈತ ಸಂಘಗಳು, ಕಬ್ಬು ಬೆಳೆಗಾರರಿಗೆ ಪತ್ರಿಕೆ ಸಹಿತ ವಿವಿಧ ಮಾಧ್ಯಮಗಳ ಮೂಲಕ ತಿಳಿಸಲಾಗಿತ್ತು. ಈ ಸಂಬಂಧ ಯಾವುದೇ ಆಕ್ಷೇಪಣೆಗಳು ಬಾರದ ಹಿನ್ನೆಲೆಯಲ್ಲಿ ಕಬ್ಬು ಅರೆಯುವಿಕೆ ಮುಕ್ತಾಯಗೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.

3. ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಅವರು ಕೇಂದ್ರ ರಕ್ಷಣಾ ಖಾತೆ ಸಚಿವ ರಾಜನಾಥಸಿಂಗ್ ಅವರನ್ನು ನಿನ್ನೆ ದೆಹಲಿಯಲ್ಲಿ ಭೇಟಿ ಮಾಡಿ ಬೆಳಗಾವಿ ಕ್ಷೇತ್ರದ ಬಹುದಿನಗಳ ಬೇಡಿಕೆಯಾದ ಮರಾಠಾ ಲಘು ಪದಾತಿದಳ ಮತ್ತು ಮಿಲಿಟರಿ ವ್ಯಾಪ್ತಿಯಲ್ಲಿರುವ ನಾಗರಿಕ ಪ್ರದೇಶಗಳನ್ನು ಮಹಾನಗರಪಾಲಿಕೆ ವ್ಯಾಪ್ತಿಗೆ ಹಸ್ತಾಂತರಿಸಬೇಕು ಎನ್ನುವ ವಿಷಯದ ಕುರಿತು ಚರ್ಚೆ ನಡೆಸಿದರು.

ಕಂಟೋನ್ಮೆಂಟ್ ವ್ಯಾಪ್ತಿಯಲ್ಲಿರುವ ನಾಗರಿಕ ಪ್ರದೇಶಗಳನ್ನು ಗುರುತಿಸಿ, ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಕಂಟೋನ್ಮೆಂಟ್ ಬೋರ್ಡ ಅಧಿಕಾರಿಗಳಿಗೆ ಸೂಚನೆ ನೀಡಬೇಕು ಎಂದು ಮನವಿ ಮಾಡಿದ ಸಂಸದರು, ಇದರಿಂದ ಈ ಪ್ರದೇಶಗಳಲ್ಲಿ ನಾಗರಿಕ ಸೌಲಭ್ಯಗಳನ್ನು ಕಲ್ಪಿಸಲು ಸಾಧ್ಯವಾಗಲಿದೆ ಎಂದು ಸಚಿವರಿಗೆ ಮನವರಿಕೆ ಮಾಡಿಕೊಟ್ಟರು. ಸಚಿವರು ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಜಗದೀಶ ಶೆಟ್ಟರ್ ತಿಳಿಸಿದ್ದಾರೆ.

ಜತೆಗೆ ರೈಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್‌ಅವರನ್ನು ಭೇಟಿ ಮಾಡಿದ ಸಂಸದರು, ಬೆಳಗಾವಿ ಜಿಲ್ಲೆಯ, ಸವದತ್ತಿಯಲ್ಲಿ ನಿಲುಗಡೆಯಾಗುವಂತೆ ಲೋಕಾಪುರ-ಧಾರವಾಡ ನಡುವೆ ನೂತನ ರೈಲು ಆರಂಭಿಸಲು, ಮನವಿ ಮಾಡಿದರು.

4. ಪ್ರಯಾಣಿಕರ ಅನುಕೂಲಕ್ಕಾಗಿ ಮತ್ತು ಟಿಕೆಟ್ ದರ ನಿಯಂತ್ರಣಕ್ಕಾಗಿ ಮಂಗಳೂರು–ಬೆಂಗಳೂರು ನಡುವೆ ಹೆಚ್ಚುವರಿಯಾಗಿ ಏರ್ ಇಂಡಿಯಾ ಹಾಗೂ ವಿಸ್ತಾರ ಸಂಸ್ಥೆಗಳ ವಿಮಾನ ಪ್ರಾರಂಭಿಸಬೇಕು ಎಂದು ಚಿಕ್ಕಮಗಳೂರು–ಉಡುಪಿ ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರು ಕೇಂದ್ರ ವಿಮಾನಯಾನ ಖಾತೆ ಸಚಿವ ರಾಮ ಮೋಹನ್ ನಾಯ್ಡು ಅವರಿಗೆ ಬರೆದ ಪತ್ರಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಈ ಕುರಿತು ಪರಿಶೀಲಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರು ಸಾಮಾಜಿಕ ಜಾಲತಾಣದ ಮೂಲಕ ಮಾಹಿತಿ ನೀಡಿದ್ದಾರೆ.

5. ಪ್ರಯಾಣಿಕರ ದಟ್ಟಣೆ ಕಡಿಮೆಗೊಳಿಸಲು ನರಸಾಪುರ ಮತ್ತು ಬೆಂಗಳೂರಿನ ಸರ್ ಎಂ.ವಿಶ್ವೇಶ್ವರಯ್ಯ ಟರ್ಮಿನಲ್ ನಿಲ್ದಾಣಗಳ ನಡುವೆ ವಾರಕೊಮ್ಮೆ ಚಲಿಸುವ ವಿಶೇ ' ರೈಲುಗಳ ಸೇವೆ ಮುಂದುವರಿಸುವಂತೆ ದಕ್ಷಿಣ ಮಧ್ಯ ರೈಲ್ವೆ ಸೂಚಿಸಿದೆ.

6. ವಿವಿಧ ಇಲಾಖೆ, ಸಂಸ್ಥೆಗಳ ಸಹಯೋಗದಲ್ಲಿ ಬೆಂಗಳೂರು ನಗರ ಜಿಲ್ಲಾಡಳಿತ, ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ಇಂದು ರಾಜ್ಯ ಯುವ ಕೇಂದ್ರದ ಯವನಿಕ ಸಭಾಂಗಣದಲ್ಲಿ ಆಯೋಜಿಸಿದೆ. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಳ್ಳಲಿದ್ದಾರೆ.

7. ಮಂಡ್ಯದಲ್ಲಿ ಆಯೋಜಿತ,87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆಗೆ ಆಹ್ವಾನಿಸಲಾದ 110 ಲೇಖನಗಳ ಪೈಕಿ, 80 ಲೇಖನಗಳು, ಸಮಿತಿಗೆ ತಲುಪಿವೆ ಎಂದು, ಅಪರ ಜಿಲ್ಲಾಧಿಕಾರಿ ಎಚ್.ಎಲ್.ನಾಗರಾಜು ತಿಳಿಸಿದ್ದಾರೆ. (48)

8. ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ವತಿಯಿಂದ 9ಕೋಟಿ ರೂಪಾಯಿ ಲಾಭಾಂಶದ ಚೆಕ್ ಹಾಗೂ 2 ಕೋಟಿ ರೂಪಾಯಿಗಳ ಚೆಕ್‌ನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ, ನಿನ್ನೆ ಬೆಂಗಳೂರಿನಲ್ಲಿ ಹಸ್ತಾಂತರಿಸಿದರು.

9. ಗದಗ ಜಿಲ್ಲೆ, ರೋಣ ತಾಲೂಕಿನಅಬ್ಬಿಗೇರಿ ಹಾಗೂ ಸವಡಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೈಗೊಂಡ, ವಿವಿಧ ಕಾಮಗಾರಿಗಳನ್ನು, ರಾಜ್ಯ ಕಾಮಗಾರಿಗಳ ಪರಿಶೀಲನಾ ತಂಡ ವೀಕ್ಷಿಸಿತು. (55)

10. ಕೋಲಾರದಲ್ಲಿ ನಾಳೆ,ರಾಜ್ಯ ಮಾನವ ಹಕ್ಕುಗಳ ಆಯೋಗ, ಸಭೆ ನಡೆಸಲಿದ್ದು, ಸಾರ್ವಜನಿಕರಿಂದ ಅಹವಾಲು ಆಲಿಸಲಿದೆ. (63)

11.10 ಮತ್ತು 12 ವರ್ಷದೊಳಗಿನ ಬಾಲಕ, ಬಾಲಕಿಯರಿಗಾಗಿ, ರಾಜ್ಯ ರ್‍ಯಾಂಕಿಂಗ್ ಟೆನಿಸ್ ಪಂದ್ಯಾವಳಿಯನ್ನು, ಧಾರವಾಡದ ರಾಜ್ಯಾಧ್ಯಕ್ಷ ಪೆವಿಲಿಯನ್ ಆವರಣದಲ್ಲಿ, ನಾಡಿದ್ದು 30 ಹಾಗೂ ಡಿಸೆಂಬರ್ 1 ರಂದು ಧಾರವಾಡ ಜಿಲ್ಲಾ ಟೆನಿಸ್ ಸಂಸ್ಥೆಆಯೋಜಿಸಿದೆ.

12.ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ ಹಂಗಾಮಿನ ಸಾಧಾರಣ ಗುಣಮಟ್ಟದ ಹತ್ತಿಯನ್ನು,ರೈತರು ಮಾರಾಟ ಮಾಡಲು, ರಾಜ್ಯದ 11 ಜಿಲ್ಲೆಗಳಲ್ಲಿ, 26 ಖರೀದಿ ಕೇಂದ್ರಗಳನ್ನು ಹುಬ್ಬಳ್ಳಿಯ ಭಾರತೀಯ ಹತ್ತಿ ನಿಗಮ ತೆರೆದಿದೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..